<u>ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,</u>

<u>ಹಗರಿಬೊಮ್ಮನಹಳ್ಳಿ</u>

ಸಿ ಸಿ ನಂ. 1418/2024

<u>ಸಾಕ್ಷಿಗೆ ದಿನಾಂಕ 06-03-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

C.W.: 2 P.W.: 1

| | | |
|---|---|---|
| ಹೆಸರು | ಃ | ಯಲ್ಲಾರಿ ಇಂದ್ರಪ್ಪ |
| ತಂದೆಯ ಹೆಸರು | ಃ | ಅಂದಪ್ಪ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ಕೂಲಿ |
| ವಾಸ ಸ್ಥಳ | ಃ | ಇಟಗಿ ಗ್ರಾಮ |

<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>

ಆರೋಪಿಯನ್ನು ನಾನು ನೋಡಿಲ್ಲ, ಅವನು ಯಾವ ಕಾರಣಕ್ಕಾಗಿ ನ್ಯಾಯಾಲಯಕ್ಕೆ ಬಂದಿದ್ದಾನೆ ಅವನ ಮೇಲೆ ಏನು ಪ್ರಕರಣ ಇದೆ ಎಂದು ನನಗೆ ಗೊತ್ತಿಲ್ಲ, ಸಾಕ್ಷಿಗೆ ಜಪ್ತುಪಂಚನಾಮೆ ಮತ್ತು ನಕಾಶೆಯನ್ನು ತೋರಿಸಲಾಗಿ ಸಾಕ್ಷಿಯು ಅವುಗಳಲ್ಲಿ ತನ್ನ ಸಹಿ ಇವೆ ಅಂತಾ ನೋಡಿ ಗುರುತಿಸಿದ್ದು ಸದರಿ ದಾಖಲೆಗಳನ್ನು ಕ್ರಮವಾಗಿ ನಿಪಿ-1 ಮತ್ತು 2 ಎಂದು ಮತ್ತು ಅವುಗಳ ಮೇಲಿರುವ ಸಾಕ್ಷಿಯ ಸಹಿಗಳನ್ನು ನಿಪಿ-1ಎ ಮತ್ತು 2ಎ ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಿಗೆ ಈಗ 1 ವರ್ಷದ ಹಿಂದೆ ಇಟಗಿ ಪೋಲೀಸ್ ಠಾಣೆಯ ಹತ್ತಿರ ಟೀ ಅಂಗಡಿಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಜೊತೆ ಬೇರೆ ಯಾರು ಸದರಿ ದಾಖಲೆಗಳಿಗೆ ಸಹಿ ಮಾಡಿರುತ್ತಾರೆನ್ನುವುದು ನನಗೆ ಗೊತ್ತಿಲ್ಲ. ಸದರಿ ದಾಖಲೆಗಳಲ್ಲಿ ಏನು ಬರೆದಿರುತ್ತಾರೆನ್ನುವುದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಆರೋಪಿಯಿಂದ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿಲ್ಲ ಆರೋಪಿಯನ್ನು ಬಂಧಿಸಿಲ್ಲ, ಯಾವುದೇ ಪಂಚನಾಮೆ ಜರುಗಿಸಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-</u>

ದಿಃ30-07-2024 ರಂದು ಸಂಜೆ 7.15 ರಿಂದ 7.45 ರವರೆಗೆ ಇಟಗಿ ಪೋಲೀಸರು ಘಟನಾ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಜರುಗಿಸಿ ನಿಪಿ-2 ರಂತೆ ನಕಾಶೆಯನ್ನು ತಯಾರಿಸಿ ಆರೋಪಿಯಿಂದ ಒಂದು ಮಟಕಾ ಪಟ್ಟಿ, ಒಂದು ಪೆನ್ನು

ಹಾಗೂ ರೂ.3100/- ಗಳ ನಗದು ಹಣವನ್ನು ಅಮಾನತ್ತುಪಡಿಸಿಕೊಂಡಿರತ್ತಾರೆಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ನಾನು ನಿಪಿ-1 ಮತ್ತು 2 ರಲ್ಲಿರುವ ವಿಚಾರ ತಿಳಿದುಕೊಂಡು ಸದರಿ ದಾಖಲೆಗಳಿಗೆ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ